ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ     ದಿನಾಂಕ : DATE : 7/3/21

# ಮಧ್ಯಂತರ ರಕ್ಷಣೆ

## ಆರು ಸಚಿವರ ಅರ್ಜಿ ಪರಿಗಣಿಸಿದ ಸಿವಿಲ್ ಕೋರ್ಟ್

## ಮಾನಹಾನಿಕಾರಕ ಸುದ್ದಿ ಪ್ರಕಟಿಸದಂತೆ ನಿರ್ಬಂಧ

ಬೆಂಗಳೂರು: ಮಾಜಿ ಸಚಿವ ರಮೇಶ್ ಜಾರಕಿಹೊಳಿ ಅವರ ಸಿಡಿ ಪ್ರಕರಣದ ಬೆನ್ನಲ್ಲೇ, ನ್ಯಾಯಾಲಯದ ಮೊರೆ ಹೋಗಿರುವ ರಾಜ್ಯ ಸರ್ಕಾರದ ಆರು ಮಂದಿ ಸಚಿವರಿಗೆ 'ಮಾನ ರಕ್ಷಣೆ'ಯ ಅಭಯ ಸಿಕ್ಕಿದೆ.

ಶಿವರಾಮ್ ಹೆಬ್ಬಾರ್, ಡಾ.ಕೆ.ಸುಧಾಕರ್, ಎಸ್.ಟಿ. ಸೋಮಶೇಖರ್, ಭೈರತಿ ಬಸವರಾಜು, ಬಿ.ಸಿ. ಪಾಟೀಲ್ ಹಾಗೂ ನಾರಾಯಣಗೌಡ ಅವರು ಸಲ್ಲಿಸಿದ್ದ ಅರ್ಜಿ ಕುರಿತಂತೆ ನಗರದ 10ನೇ ಹೆಚ್ಚುವರಿ ಸಿಟಿ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯದ ನ್ಯಾಯಾಧೀಶ ಡಿ.ಎಸ್.ವಿಜಯಕುಮಾರ್ ವಿಚಾರಣೆ ನಡೆಸಿದರು. ಈ ಎಲ್ಲಾ ಸಚಿವರ ವಿರುದ್ಧ ಪರಿಶೀಲಿಸದ, ದೃಢಪಡಿಸದ ಸುದ್ದಿಗಳು, ಮಾನಹಾನಿಕಾರಕ ವಿಷಯಗಳನ್ನು ಪ್ರಕಟಿಸದಂತೆ ಮತ್ತು ಪ್ರಸಾರ ಮಾಡದಂತೆ ಹಾಗೂ ಸಿಡಿ ಬಿಡುಗಡೆ ಮಾಡದಂತೆ ಎಲ್ಲಾ ಮಾಧ್ಯಮಗಳಿಗೆ ನ್ಯಾಯಾಲಯ ತಾತ್ಕಾಲಿಕ ತಡೆ ನೀಡಿದರು.

ಅಲ್ಲದೆ, ದಾವೆಯಲ್ಲಿ ಪ್ರತಿವಾದಿಗಳನ್ನಾಗಿ ಮಾಡಲಾಗಿರುವ ಮಾಧ್ಯಮ ಸಂಸ್ಥೆಗಳಿಗೆ ನೋಟಿಸ್ ಜಾರಿಗೊಳಿಸಿ, ಅದಕ್ಕೆ ಉತ್ತರಿಸುವಂತೆ ಸೂಚಿಸಿ ವಿಚಾರಣೆಯನ್ನು ಮಾ.31ಕ್ಕೆ ಮುಂದೂಡಿದರು. ಅರ್ಜಿದಾರರು ರಾಜ್ಯ ಸರ್ಕಾರದಲ್ಲಿ ಉನ್ನತ ಹುದ್ದೆಗಳನ್ನು ಹೊಂದಿದ್ದಾರೆ. ಒಂದೊಮ್ಮೆ ಅವರ ವಿರುದ್ಧ ಯಾವುದೇ ಪರಿಶೀಲನೆ ಇಲ್ಲದೆ, ದೃಢಪಡಿಸಿಕೊಳ್ಳದೆ ಮಾನಹಾನಿಕಾರಕ ಸುದ್ದಿಗಳನ್ನು ಪ್ರಸಾರ ಅಥವಾ ಪ್ರಕಟ ಮಾಡಿದರೆ, ಅವರ ಪ್ರತಿಷ್ಠೆಗೆ ಸರಿಪಡಿಸಲಾರದಷ್ಟು ಧಕ್ಕೆ ಬರುತ್ತದೆ ಅಲ್ಲದೆ ಸಮಾಜದಲ್ಲಿ ಮತ್ತು ಸ್ವಂತ ಕುಟುಂಬಗಳಲ್ಲಿ ಗೌರವಕ್ಕೆ ಚ್ಯುತಿ ಬರುತ್ತದೆ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

**ಕೋರ್ಟ್ ಹೇಳಿದ್ದೇನು?:** ತಮ್ಮ ನಾಯಕರ ಬಗ್ಗೆ ತಿಳಿದುಕೊಳ್ಳುವ ಹಕ್ಕು ನಾಗರಿಕರಿಗಿದೆ. ಅವರ ಚುನಾಯಿತ ಪ್ರತಿನಿಧಿಗಳು ಯಾವ ರೀತಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂಬುದನ್ನು ತಿಳಿದುಕೊಳ್ಳುವ ಅಧಿಕಾರವೂ ಅವರಿಗಿದೆ.

> 7ನೇ ಪುಟಕ್ಕೆ



### ಆರು ಸಚಿವರು ಹೇಳಿದ್ದೇನು?

ನಮ್ಮ ವಿರುದ್ಧ ಷಡ್ಯಂತ್ರಗಳು ನಡೆದಾಗ ಇಂತಹ ದುಷ್ಟಶಕ್ತಿಗಳನ್ನು ಎದುರಿಸುವುದು ಅನಿವಾರ್ಯ. ಜನಮನ್ನಣೆ ಗಳಿಸುತ್ತಿರುವ ಸಚಿವರ ವಿರುದ್ಧ ವ್ಯವಸ್ಥಿತ ಸಂಚು ರೂಪಿಸಿ ತೇಜೋವಧೆ ಮಾಡುವ ಗುಮಾನಿ ಇದೆ.
— ಡಾ.ಕೆ.ಸುಧಾಕರ್, ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವ

ಮಾನಹಾನಿ ವರದಿಗಳಿಂದ ನಮ್ಮ ತೇಜೋವಧೆ ಆಗುತ್ತದೆ. ತಂತ್ರಜ್ಞಾನ ಬಳಸಿ ಏನು ಬೇಕಾದರೂ ಮಾಡಬಹುದು. ನಮ್ಮ ಭವಿಷ್ಯ ರಾಜಕೀಯ ಜೀವನ ಗಮನದಲ್ಲಿಟ್ಟುಕೊಂಡು ನ್ಯಾಯಾಲಯಕ್ಕೆ ಹೋಗಿದ್ದೇವೆ.
— ಭೈರತಿ ಬಸವರಾಜ್, ನಗರಾಭಿವೃದ್ಧಿ ಸಚಿವ

ನಾವು ಯಾವುದೇ ಭಯಕ್ಕೆ ನ್ಯಾಯಾಲಯಕ್ಕೆ ಹೋಗಿಲ್ಲ. ಸತ್ಯಾಂಶ ಇದ್ದರೆ ಸಿ.ಡಿ. ಬಿಡುಗಡೆ ಮಾಡಲಿ. ಆದರೆ, ಗ್ರಾಫಿಕ್‌ನಂತೆ ಕ್ರಿಯೆಟ್ ಮಾಡಿ ಗೌರವಕ್ಕೆ ಧಕ್ಕೆ ತರಬಾರದು ಎಂಬ ಉದ್ದೇಶದಿಂದ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದೇವೆ.
— ನಾರಾಯಣಗೌಡ, ಕ್ರೀಡಾ ಸಚಿವ

ಒಬ್ಬ ರೈತನ ಮಗನಾಗಿ ಯಾವುದೇ ಗಾಡ್ ಫಾದರ್ ಇಲ್ಲದೆ ಇಷ್ಟರ ಮಟ್ಟಕ್ಕೆ ಬೆಳೆದು ಬಂದಿದ್ದೇನೆ. ಇದು ಬಹಳ ಜನರಿಗೆ ಸಹಿಸಲು ಆಗುತ್ತಿಲ್ಲ. ಹೀಗಾಗಿ, ಯಾವುದೋ ರಾಜಕೀಯ ಷಡ್ಯಂತ್ರಕ್ಕೆ ವಿನಾಕಾರಣ ಸತ್ಯಾಸತ್ಯತೆ ಅರಿಯದೆ ತೇಜೋವಧೆ ಆಗಬಾರದು ಎಂಬ ದೃಷ್ಟಿಯಿಂದ ಮುನ್ನೆಚ್ಚರಿಕೆಯಾಗಿ ಕೋರ್ಟ್ ಮೊರೆ ಹೋಗಿದ್ದೇವೆ.
— ಬಿ.ಸಿ.ಪಾಟೀಲ್, ಕೃಷಿ ಸಚಿವ

2-3 ನಿಮಿಷಗಳಲ್ಲಿ ನಮ್ಮ ತೇಜೋವಧೆ ಮಾಡುವ ಸುದ್ದಿಗಳು ಪ್ರಸಾರವಾದರೆ 20 ವರ್ಷಗಳಿಂದ ರಾಜಕಾರಣ ಮಾಡಿಕೊಂಡು ಜನರ ಸೇವೆ ಮಾಡಿಕೊಂಡು ಬರುತ್ತಿರುವ ನಮ್ಮ ಬಗ್ಗೆ ಜನತೆ ಏನೆಂದುಕೊಳ್ಳುತ್ತಾರೆ?
— ಎಸ್.ಟಿ.ಸೋಮಶೇಖರ್, ಸಹಕಾರ ಸಚಿವ

ಆಧುನಿಕ ತಂತ್ರಜ್ಞಾನ ಬಳಸಿ ಮಾಡಲಾಗುತ್ತಿರುವ ಬ್ಲ್ಯಾಕ್‌ಮೇಲ್ ಹಾಗೂ ವೈಯಕ್ತಿಕ ತೇಜೋವಧೆ ತಡೆಗೆ ನ್ಯಾಯಾಲಯದ ಮೊರೆ ಹೋಗಿದ್ದೇವೆ. ಬಿಜೆಪಿ ಸರಕಾರ ಬಲಪಡಿಸಲು ಬಂದವರನ್ನೇ ಗುರಿಯಾಗಿಸಿಕೊಳ್ಳಲಾಗುತ್ತಿದೆ.
— ಶಿವರಾಮ್ ಹೆಬ್ಬಾರ್, ಕಾರ್ಮಿಕ ಸಚಿವ

(7)

# ಮಧ್ಯಂತರ ರಕ್ಷಣೆ

1ನೇ ಪುಟದಿಂದ › ಅದೇ ರೀತಿ, ಮಾಧ್ಯಮಗಳಿಗೆ ಅಭಿವ್ಯಕ್ತಿ ಸ್ವಾತಂತ್ರ್ಯವಿದೆ. ತಮ್ಮ ಚುನಾಯಿತ ಪ್ರತಿನಿಧಿಗಳ ನಡತೆಯನ್ನು ಜನರು ಮೌಲ್ಯಮಾಪನ ಮಾಡುವಂತಹ ವಿಚಾರಗಳನ್ನು ಪ್ರಸಾರ ಮಾಡುವುದು ಮಾಧ್ಯಮಗಳ ಕರ್ತವ್ಯವಾಗಿದೆ. ಅದಕ್ಕಾಗಿ ಮಾಧ್ಯಮವನ್ನು ಪ್ರಜಾಪ್ರಭುತ್ವದ ನಾಲ್ಕನೇ ಅಂಗವಾಗಿ ಪರಿಗಣಿಸಲಾಗಿದೆ. ಇದೇ ವೇಳೆ, ಮಾನಹಾನಿಕಾರಕ ಸುದ್ದಿಗಳ ಪ್ರಸಾರದಿಂದ ಉಂಟಾಗುವ ತೇಜೋವಧೆಯಿಂದ ರಕ್ಷಣೆ ಪಡೆದುಕೊಳ್ಳುವ ಹಕ್ಕು ಯಾರುವಾದರೂ ಹೊಂದಿದ್ದಾರೆ ಎಂದು ನ್ಯಾಯಾಲಯ ಆದೇಶದಲ್ಲಿ ಹೇಳಿದೆ.

**19 ಸಿಡಿಯ ಗುಮ್ಮ:** ರಮೇಶ್ ಜಾರಕಿಹೊಳಿಗೆ ಸಂಬಂಧಿಸಿದ ಸಿಡಿ ಬಹಿರಂಗವಾದ ಬೆನ್ನಲ್ಲೇ ಇನ್ನೂ ಹಲವು ಸಚಿವರು, ಶಾಸಕರ 19 ಸಿಡಿಗಳಿವೆ, ಹಳೆ ಮೈಸೂರು ಭಾಗದ ಪ್ರಭಾವಿ ಸಚಿವರೊಬ್ಬರ ಸಿಡಿ ಇದೆ ಅದನ್ನು ಶೀಘ್ರದಲ್ಲೇ ಬಹಿರಂಗ ಮಾಡಲಾಗುವುದು ಎಂಬ ಮಾಧ್ಯಮಗಳ ಸುದ್ದಿ ತುಣುಕುಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಲಾದ ದೂರುದಾರರು, ಇಂತಹ ಸುಳ್ಳು ಸುದ್ದಿಗಳು ಹರಿದಾಡುತ್ತಿರುವುದರಿಂದ ಕ್ಷೇತ್ರದ ಜನ ನಮ್ಮನ್ನು ಪ್ರಶ್ನಿಸುತ್ತಿದ್ದಾರೆ. ನಮಗೆ ಮುಜುಗರ ಉಂಟಾಗುತ್ತಿದೆ. ಅಮೆರಿಕಾ ಮಾಜಿ ಅಧ್ಯಕ್ಷ ಬರಾಕ್ ಒಬಾಮಾ, ಕ್ವೀನ್ ಎಲಿಜಬೆತ್ ಅವರ ಕುರಿತ ನಕಲಿ ಸಿಡಿ ಗಳು ಜಾಗತಿಕ ಮಟ್ಟದಲ್ಲಿ ಸಾಕಷ್ಟು ಸದ್ದು ಮಾಡಿದ್ದವು ಎಂಬ ಅಂಶವನ್ನು ದೂರುದಾರರು ಅರ್ಜಿಯಲ್ಲಿ ಉಲ್ಲೇಖಿಸಿದ್ದಾರೆ.

## ಕನಕಪುರ, ಬೆಳಗಾವಿ ಕೈವಾಡ

ರಮೇಶ್ ಜಾರಕಿಹೊಳಿ ಪ್ರಕರಣದ ಸಿಡಿ ಬಹಿರಂಗದ ಹಿಂದೆ ಕನಕಪುರ, ಬೆಳಗಾವಿ ಕಡೆಯವರ ಕೈವಾಡ ಇದೆ ಎಂದು ಸಚಿವ ಯೋಗೇಶ್ವರ್ ಬಾಂಬ್ ಸಿಡಿಸಿದ್ದಾರೆ. ಸಿಡಿ ಪ್ರಕರಣದಲ್ಲಿ ರಾಜಕೀಯ ಷಡ್ಯಂತ್ರ ಕೆಲಸ ಮಾಡಿದೆ. ಮುಂದಿನ ದಿನಗಳಲ್ಲಿ ಅವರೆಲ್ಲರೂ ಅನುಭವಿಸುತ್ತಾರೆ. ಇಡೀ ಪ್ರಕರಣದಲ್ಲಿ ರಾಜಕೀಯ ಷಡ್ಯಂತ್ರ ಇದೆ ಎಂದು ಆರೋಪಿಸಿದರು. ಆರು ಸಚಿವರು ನ್ಯಾಯಾಲಯ ಮೊರೆಹೋಗಿರುವ ಬಗ್ಗೆ ಕೇಳಿದಾಗ, 'ಈ ಬಗ್ಗೆ ನನಗೇನು ಕೇಳ್ತೀರಾ? ಅವರ ವೈಯಕ್ತಿಕ ರಕ್ಷಣೆಗೆ ಕೋರ್ಟ್‌ಗೆ ಮೊರೆಹೋಗಿದ್ದಾರೆ. ಯಾರು ಕೋರ್ಟ್‌ಗೆ ಹೋಗಿದ್ದಾರೋ ಅವರನ್ನೇ ಕೇಳಿ. ಈ ವಿವಾದದಲ್ಲಿ ಮಾತ್ರ ನನ್ನನ್ನು ಎಳೆಯಬೇಡಿ'